8) **ಕರಾವಳಿ ವೃತ್ತ ಅಭಿವೃದ್ಧಿ** : ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಕರಾವಳಿ ಪ್ರದೇಶಗಳಲ್ಲಿ ಬರುವ ಪ್ರವಾಸಿ ಸ್ಥಳಗಳ ಸಮಗ್ರ ಅಭಿವೃದ್ಧಿಗಾಗಿ ಭಾರತ ಸರ್ಕಾರದ ಪ್ರವಾಸೋದ್ಯಮ ಮಂತ್ರಾಲಯವು 698.00 ಲಕ್ಷ ರೂ.ಗಳ ಅಂದಾಜು ಯೋಜನೆಗೆ ಅನುಮೋದನೆ ನೀಡಿ ಮೊದಲ ಕಂತಾಗಿ 209.40 ಲಕ್ಷ ರೂ.ಗಳನ್ನು ಬಿಡುಗಡೆ ಮಡಿರುತ್ತದೆ. ಇದರಲ್ಲಿ ಉತ್ತರ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಹೊನ್ನಾವರ ಮುರುಡೇಶ್ವರ ಹಾಗೂ ಗೋಕರ್ಣ ಬೀಚುಗಳು ಸೇರಿರುತ್ತವೆ. ಈ ಸ್ಥಳಗಳಲ್ಲಿ ಪ್ರವಾಸಿ ಸೌಲಭ್ಯಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗುತ್ತದೆ.

ಇ) ಭಾರತ ಸರ್ಕಾರದ ಪ್ರವಾಸೋದ್ಯಮ ಮಂತ್ರಾಲಯವು Coastal circuit ಅಭಿವೃದ್ಧಿಗೆ ಉಳಿದ ಹಣವನ್ನು ಬಿಡುಗಡೆ ಮಾಡಿದ ಕೂಡಲೇ ಪ್ರವಾಸೋದ್ಯಮ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುವುದು.

730(979) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕುಮಟಾ ಪಟ್ಟಣದ ಮಧ್ಯಭಾಗದಲ್ಲಿರುವ ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಿಂದ ನಾಗರೀಕರಿಗೆ, ಪ್ರಯಾಣಿಕರಿಗೆ ತೀವ್ರ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಬಸ್ ನಿಲ್ದಾಣದಲ್ಲಿ ರಾಷ್ಟ್ರೀಯ ಹೆದ್ದಾರಿ ಸಮೀಪ ಕೃಷಿ ಇಲಾಖೆಯ ಖಾಲಿ ಸ್ಥಳಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆಯನ್ನು ಈ ವರೆಗೂ ಕಾರ್ಯಗತಗೊಳಿಸದೇ ಇರುವುದಕ್ಕೆ ಕಾರಣವೇನು;

ಇ) ಸದರಿ ನಿಲ್ದಾಣವನ್ನು ಕೃಷಿ ಇಲಾಖೆಯ ಖಾಲಿ ಸ್ಥಳಕ್ಕೆ ಯಾವಾಗ ಸ್ಥಳಾಂತರಿಸಲಾಗುವುದು?

ಶ್ರೀ ಎನ್. ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಬಂದಿದೆ.

ಆ) ರಾಷ್ಟ್ರೀಯ ಹೆದ್ದಾರಿ ಸಮೀಪ ಕೃಷಿ ಇಲಾಖೆಯ ಜಮೀನಿನ ಪಕ್ಕದಲ್ಲಿರುವ ಅರಣ್ಯ ಇಲಾಖೆಯ ಎರಡೂವರೆ ಎಕರೆಯ ನಿವೇಶನವನ್ನು ಸಂಸ್ಥೆಯ ವಶಕ್ಕೆ ಪಡೆಯುವ ಬಗ್ಗೆ ಕ್ರಮ ಕೈಗೊಳ್ಳಲಾಗಿದ್ದು, ರೂಪಾಯಿ 9,88,400/– ಮೊತ್ತವನ್ನು ಅರಣ್ಯ ಇಲಾಖೆಗೆ ಪಾವತಿ ಮಾಡಲಾಗಿದೆ. ನಿವೇಶನವನ್ನು ಅರಣ್ಯ ಇಲಾಖೆಯವರು ಸಂಸ್ಥೆಗೆ ಹಸ್ತಾಂತರಿಸಿದ ನಂತರ ಹೊಸ ಬಸ್ ನಿಲ್ದಾಣವನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಅರಣ್ಯ ಇಲಾಖೆಯಿಂದ ನಿವೇಶನವನ್ನು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಿದ ನಂತರ ಈ ಬಗ್ಗೆ ಕ್ರಮ ಜರುಗಿಸಲಾಗುವುದು.

731(1133) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿಕ್ಕಬಳ್ಳಾಪುರ ನಗರವು ಉಪ ವಿಭಾಗದ ಕೇಂದ್ರವಾಗಿದ್ದು, ಸುಮಾರು 50,000 ಜನಸಂಖ್ಯೆಯಿದ್ದು, ಒಳಚರಂಡಿಯ ಯೋಜನೆ ಇದುವರೆವಿಗೂ ಮಂಜೂರಾತಿ ಆಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;]

ಆ) ಒಳಚರಂಡಿಯಿಲ್ಲದೆ ನಗರದ ನೈರ್ಮಲ್ಯದ ಕೊರತೆಯುಂಟಾಗಿ ಸಾಂಕ್ರಾಮಿಕ ರೋಗಗಳು ಉಲ್ಭಣಿಸುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಚಿಕ್ಕಬಳ್ಳಾಪುರ ನಗರದಲ್ಲಿ ಒಳಚರಂಡಿ ಯೋಜನೆಯನ್ನು ಮಂಜೂರು ಮಾಡಿ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಲು ಸರ್ಕಾರ ಗಮನ ಹರಿಸುವುದೇ?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) :

ಅ) ಬಂದಿದೆ.

ಆ) ಇಲ್ಲ.

ಇ) ಒಳಚರಂಡಿ ಕಾಮಗಾರಿಯನ್ನು ಕೈಗೊಳ್ಳಬೇಕಾದರೆ ತಲಾ ದಿನಂ ಪ್ರತಿ 100 ಲೀಟರ್ ನೀರು ಸರಬರಾಜು ಇರಬೇಕಾಗುತ್ತದೆ. ಈ ರೀತಿ 100 ಲೀಟರ್ ನೀರನ್ನು ಸರಬರಾಜು ಮಾಡಲು ಜಕ್ಕಲಮಡಗು ಜಲಾಶಯದ ಸಾಮರ್ಥ್ಯವನ್ನು ಹೆಚ್ಚಿಸಿ ನೀರು ಸರಬರಾಜು ಯೋಜನೆಯನ್ನು ಕೈಗೊಳ್ಳಬೇಕಾಗುತ್ತದೆ. ಈ ಯೋಜನೆಗೆ ರೂ. 14.45 ಕೋಟಿಗಳ ಅಂದಾಜು ವೆಚ್ಚವನ್ನು ತಯಾರಿಸಿ ಚಿಕ್ಕಬಳ್ಳಾಪುರ ನಗರ ಸಭೆಗೆ ದಿನಾಂಕ 28–3–2006ರಂದು ಕಳುಹಿಸಲಾಗಿದೆ.

732(1134) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿಕ್ಕಬಳ್ಳಾಪುರ ನಗರ ವ್ಯಾಪ್ತಿಯಲ್ಲಿ ಐ.ಡಿ.ಎಸ್.ಎಂ.ಟಿ. ಯೋಜನಾವತಿಯಿಂದ ನಿವೇಶನಗಳು ಹರಾಜಾಗಿದ್ದರೂ ಇದುವರೆವಿಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನಿವೇಶನಗಳು ಹಂಚಿಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನಿವೇಶನಗಳ ಹಂಚಿಕೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಶೇಕಡವಾರು ಮೀಸಲಾತಿಯಂತೆ ಹಂಚಿಕೆಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;